# ಅಕ್ಕಮಹಾದೇವಿ ಮಹಿಳಾ ವಿಶ್ವವಿದ್ಯಾನಿಲಯ. ವಿಜಯಪುರ

..........................................................................................

ದಿನಾಂಕ: **15-11-2017**

**ಪ್ರಕಟಣೆಯ ಕೃಪೆಗಾಗಿ.............**

ವಿಜಯಪುರ: ಅಕ್ಕಮಹಾದೇವಿ ಮಹಿಳಾ ವಿಶ್ವವಿದ್ಯಾನಿಲಯ ಪ್ರದರ್ಶಕ ಕಲೆಗಳ ಕೇಂದ್ರ ಮತ್ತು ದೃಷ್ಟಿ ಫೌಂಡೇಶನ್ ಇವರ ಸಂಯುಕ್ತಾಶ್ರಯದಲ್ಲಿ ಇದೇ 18ರಂದು ಬೆಳಿಗ್ಗೆ 11.00 ಗಂಟೆಗೆ ಸಂಗೀತ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ.

ಮಹಿಳಾ ವಿವಿ ಜ್ಞಾನಶಕ್ತಿ ಆವರಣದ ಕನ್ನಡ ವಿಭಾಗದ ಸಭಾಂಗಣದಲ್ಲಿ ಆಯೋಜಿಸಿರುವ ಈ ಕಾರ್ಯಕ್ರಮದಲ್ಲಿ ಮುಂಬೈನ ಖ್ಯಾತ ಹಿಂದುಸ್ಥಾನಿ ಗಾಯಕ ಪಂ.ಅಮರೇಂದ್ರ ದಾನೇಶ್ವರ ಮುಖ್ಯ ಅತಿಥಿಯಾಗಿ ಆಗಮಿಸಲಿದ್ದಾರೆ. ಮಹಿಳಾ ವಿವಿ ಕುಲಪತಿ ಪ್ರೊ.ಸಬಿಹಾ ಅಧ್ಯಕ್ಷತೆ ವಹಿಸುವರು. ಮುಂಬೈನ ಖ್ಯಾತ ಹಿಂದುಸ್ಥಾನಿ ಗಾಯಕ ಪಂ.ಅಮರೇಂದ್ರ ದಾನೇಶ್ವರ, ಗೋವಾದ ತಬಲಾ ವಾದಕ ಉದಯ ಕುಲಕರ್ಣಿ ಮತ್ತು ಪುಣೆಯ ಹಾರ್ಮೋನಿಯಂ ವಾದಕ ಮುಕುಂದ ಪಂಡಿತ ಸಂಗೀತ ಕಾರ್ಯಕ್ರಮ ನಡೆಸಿಕೊಡುವರು.

ಕಾರ್ಯಕ್ರಮದಲ್ಲಿ ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಬೇಕೆಂದು ಮಹಿಳಾ ವಿವಿ ಕುಲಸಚಿವ ಪ್ರೊ.ಎಲ್.ಆರ್. ನಾಯಕ ಮತ್ತು ಪ್ರದರ್ಶಕ ಕಲೆಗಳ ಕೇಂದ್ರದ ಸಂಯೋಜಕ ಡಾ.ಎಂ.ಪಿ. ಬಳಿಗಾರ ಈ ಮೂಲಕ ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.